ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE: 20/1/21

## ಜೆಡಿಎಸ್-ಬಿಜೆಪಿಯಿಂದ ಮೈತ್ರಿ ಅಭ್ಯರ್ಥಿ ಸಾಧ್ಯತೆ

# ಉಪಸಭಾಪತಿ ಚುನಾವಣೆ 29ಕ್ಕೆ

ವಿಕ ಸುದ್ದಿಲೋಕ ಬೆಂಗಳೂರು



ಉಪ ಸಭಾಪತಿಯಾಗಿದ್ದ ಧರ್ಮೇಗೌಡ ಅವರ ನಿಧನದ ಹಿನ್ನೆಲೆಯಲ್ಲಿ ಹೊಸ ಉಪ ಸಭಾಪತಿ ಆಯ್ಕೆಗೆ ಜನವರಿ 29ರಂದು ಚುನಾವಣೆ ನಡೆಯಲಿದೆ.

ಉಪ ಸಭಾಪತಿ ಚುನಾವಣೆಗೆ ಸ್ಪರ್ಧಿಸಲು ಇಚ್ಛಿಸುವವರು ಜ.28ರ ಮಧ್ಯಾಹ್ನ 3 ಗಂಟೆಯ ಒಳಗೆ ವಿಧಾನ ಪರಿಷತ್ ಕಾರ್ಯದರ್ಶಿ ಅವರಿಗೆ ನಾಮಪತ್ರ ಸಲ್ಲಿಸಬಹುದಾಗಿದೆ.

ಉಪ ಸಭಾಪತಿ ಧರ್ಮೇಗೌಡ ಅವರು ಇತ್ತೀಚೆಗೆ ಚೀರೂರಿನಲ್ಲಿ ರೈಲಿಗೆ ಮೈಯೊಡ್ಡಿ ಆತ್ಮಹತ್ಯೆ ಮಾಡಿಕೊಂಡಿದ್ದರು.

### ಮೈತ್ರಿ ನಿರೀಕ್ಷೆ

ಸಭಾಪತಿ ಸ್ಥಾನದಿಂದ ಪ್ರತಾಪ್‌ಚಂದ್ರ ಶೆಟ್ಟಿ ಅವರನ್ನು ಪದಚ್ಯುತಗೊಳಿಸಲು ಬಿಜೆಪಿ ಮತ್ತು ಜೆಡಿಎಸ್ ಮುಂದಾಗಿದ್ದವು. ಈ ಕುರಿತ ಅವಿಶ್ವಾಸ ನಿರ್ಣಯದ ವಿಚಾರ ಗೊಂದಲಕ್ಕೆ ಒಳಗಾಗಿದೆ. ಇದಲ್ಲದೆ ಡಿಸೆಂಬರ್ 15ರಂದು ಪರಿಷತ್‌ನಲ್ಲಿ ನಡೆದ ಗದ್ದಲ ಸಂಬಂಧ ವಿಚಾರಣೆಗೆ ಸಮಿತಿ ರಚಿಸಲಾಗಿದೆ. ಈ ಕುರಿತ ವರದಿಯನ್ನೂ ನಿರೀಕ್ಷಿಸಲಾಗಿದೆ. ಇದರ ಮಧ್ಯೆ ಸಮಿತಿಗೆ ಬಿಜೆಪಿ ಶಾಸಕರು ರಾಜೀನಾಮೆ ನೀಡಿದ್ದಾರೆ. ಉಪ ಸಭಾಪತಿ ಸ್ಥಾನಕ್ಕೆ ಬಿಜೆಪಿ, ಜೆಡಿಎಸ್‌ನಿಂದ ಒಮ್ಮತದ ಅಭ್ಯರ್ಥಿಯನ್ನು ಕಣಕ್ಕಿಳಿಸಬಹುದು ಎಂದು ಹೇಳಲಾಗುತ್ತಿದೆ.